# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2025 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.03.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಲ್ಕ್ ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ: 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಾಜಕಗಳನ್ನು ಮಡಿವಾಳ ಪೊಲೀಸ್ ನಿರೀಕ್ಷಕರು ಸಂಬಂಧಿತ, ಪೊಲೀಸ್ ಉಪ ಆಯುಕ್ತರು ಹಾಗೂ ಪೊಲೀಸ್ ಸಹಾಯಕ ಆಯುಕ್ತರ ನಿರ್ದೇಶನದಲ್ಲಿ ತೆರವುಗೊಳಿಸಿದ ಬಳಿಕ ನಿರ್ದೇಶಕರು, ಬಿ.ಈ.ಟಿ.ಪಿ.ಎಲ್ ಎಲೆಕ್ಟ್ರಾನಿಕ್ ಸಿಟಿ ಇವರಿಗೆ ಮಡಿವಾಳ ಪೊಲೀಸ್ ನಿರೀಕ್ಷಕರು ಪತ್ರ ಬರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು ; | ಬಂದಿರುತ್ತದೆ.<br>• ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಸ್ತೆ ವಿಭಾಜಕಗಳನ್ನು ಪೊಲೀಸ್ ಇಲಾಖೆಯಿಂದ ತೆರವುಗೊಳಿಸಿರುವುದಿಲ್ಲ.<br>• ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ರಸ್ತೆಯು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಟ್ಟಿದ್ದು, ದಿನಾಂಕ:03.04.2019 ರಂದು ರಸ್ತೆ ಸುರಕ್ಷತಾ ಸಮಿತಿಯ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ. ಹಾಗೂ ಪೊಲೀಸ್ ಇಲಾಖೆಯಿಂದ ನಿರ್ದೇಶಕರು, ಬಿ.ಇ.ಟಿ.ಪಿ.ಎಲ್. ಗೆ ಪತ್ರ ಬರೆಯಲಾಗಿರುತ್ತದೆ.<br>• ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಬಳಿಕ ಸಾರ್ವಜನಿಕ ಸುಗಮ ಸಂಚಾರದ ಹಿತದೃಷ್ಟಿಯಿಂದ ಅಗತ್ಯ ಸಿಬ್ಬಂದಿಗಳನ್ನು ಕರ್ತವ್ಯ ನಿಯೋಜಿಸುತ್ತಾ ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಂಡಿರುತ್ತದೆ. |
| (ಆ) | ಮಡಿವಾಳ ಸಂಚಾರಿ ಪೊಲೀಸ್ ನಿರೀಕ್ಷಕರು, ನಿರ್ದೇಶಕರು, ಬಿ.ಈ.ಟಿ.ಪಿ.ಎಲ್ ಎಲೆಕ್ಟ್ರಾನಿಕ್ ಸಿಟಿ ಇವರಿಗೆ ಬರೆದ ಪತ್ರದಲ್ಲಿ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಬಳಿಕ ಈ ಪ್ರದೇಶದಲ್ಲಿ ಅಪಘಾತಗಳು ಹೆಚ್ಚಾಗುತ್ತಿದ್ದು, ರಸ್ತೆ ಉಬ್ಬುಗಳನ್ನು ನಿರ್ಮಿಸಲು ಕೋರಿರುವ ಕುರಿತು ಸರ್ಕಾರದ ನಿಲುವೇನು ; | |
| (ಇ) | ಮಡಿವಾಳ ಪೊಲೀಸ್ ನಿರೀಕ್ಷಕರು ಸಂಬಂಧಿತ ಪೊಲೀಸ್ ಉಪ ಆಯುಕ್ತರು ಹಾಗೂ ಪೊಲೀಸ್ ಸಹಾಯಕ ಆಯುಕ್ತರ ನಿರ್ದೇಶನದಲ್ಲಿ ರಸ್ತೆ ವಿಭಾಜಕಗಳನ್ನು ಅಕ್ರಮವಾಗಿ ತೆರವುಗೊಳಿಸಿದ ಕಾರಣಕ್ಕಾಗಿ ಈ ಪ್ರದೇಶದಲ್ಲಿ ಅಪಘಾತಗಳು ಹೆಚ್ಚಾಗುತ್ತಿದ್ದು, ಈ ಅಪಘಾತಗಳಿಗೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? | ರಸ್ತೆ ವಿಭಾಜಕಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ರಸ್ತೆ ಸುರಕ್ಷತಾ ಸಮಿತಿಯ ನಿರ್ಣಯದಂತೆ ತೆರವುಗೊಳಿಸಿರುವುದರಿಂದ ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳುವ ಪ್ರಶ್ನೆ ಉದ್ಭವವಾಗುವುದಿಲ್ಲ. |

ಹೆಚ್‌ಡಿ 124 ಎಸ್‌ಎಸ್‌ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು